jdir_cce_kamy@yahoo.com
Website www.rjdcemys.in
Phone 0821-2426696

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಪ್ರಾಕಮೈ/ಕಾಶಿಇ/397/ಸುತ್ತೋಲೆ/2015-16(ಭಾಗ-2)

ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ
ವಿನೋಬ ರಸ್ತೆ, ಮೈಸೂರು-570005
ದಿನಾಂಕ:01.06.2018

# ಸುತ್ತೋಲೆ

ವಿಷಯ: ಚುನಾವಣೆ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸರ್ಕಾರಿ ಹಾಗೂ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು, ಬೋಧಕ ವೃಂದ ಮತ್ತು ಬೋಧಕೇತರ ವೃಂದದವರಿಗೆ ಸೂಚಿಸುವ ಬಗ್ಗೆ.

ಉಲ್ಲೇಖ: ದಿನಾಂಕ: 31.05.2018ರ ಅಪರಾಹ್ನ 4 ಗಂಟೆಗೆ ಮಾನ್ಯ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಮಾದರಿ ಚುನಾವಣೆ ನೀತಿ ಜಾರಿಗೊಳಿಸುವ ಬಗ್ಗೆ ನಡೆದ ಸಭೆ.

*******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಪಟ್ಟಂತೆ, ವಿಧಾನ ಪರಿಷತ್ ಚುನಾವಣೆ 2018ಕ್ಕೆ ಸಂಬಂಧಪಟ್ಟಂತೆ ಮಾದರಿ ಚುನಾವಣೆ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸರ್ಕಾರಿ ಹಾಗೂ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳು ಹಾಗೂ ಬೋಧಕ ಬೋಧಕೇತರ ಸಿಬ್ಬಂದಿಗಳಿಗೆ ಸೂಚನೆ ನೀಡುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿರುತ್ತಾರೆ. ಮಾದರಿ ಚುನಾವಣೆ ನೀತಿ ಸಂಹಿತೆ ಉಲ್ಲಂಘಿಸುವ ಪ್ರಾಂಶುಪಾಲರುಗಳು, ಬೋಧಕ, ಬೋಧಕೇತರ ಸಿಬ್ಬಂದಿಗಳ ವಿರುದ್ಧ ಚುನಾವಣೆ ಆಯೋಗವು ಕಟ್ಟುನಿಟ್ಟಾಗಿ ಶಿಸ್ತಿನ ಕ್ರಮಕೈಗೊಳ್ಳಲಿದ್ದು ಇದಕ್ಕೆ ಅವಕಾಶ ನೀಡದಂತೆ ಕರ್ತವ್ಯ ನಿರ್ವಹಿಸಲು ಎಲ್ಲರಿಗೂ ಈ ಮೂಲಕ ಸೂಚಿಸಲಾಗಿದೆ.

<u>ಮಾದರಿ ಚುನಾವಣೆ ನೀತಿ ಸಂಹಿತೆಗೆ ಸಂಬಂಧಪಟ್ಟ ಪ್ರಮುಖ ಸೂಚನೆಗಳು</u>

1. ವಿಧಾನ ಪರಿಷತ್ತಿಗೆ ಸ್ಪರ್ಧಿಸುವ ಅಭ್ಯರ್ಥಿಗಳು ಪ್ರಾಂಶುಪಾಲರ ಅನುಮತಿ ಇಲ್ಲದೆ ಕಾಲೇಜು ಆವರಣಕ್ಕೆ ಪ್ರವೇಶಿಸುವಂತಿಲ್ಲ
2. ಪ್ರಾಂಶುಪಾಲರು, ಬೋಧಕರು, ಭೋಧಕೇತರು ಸಿಬ್ಬಂದಿಗಳು ಕಾಲೇಜಿನಲ್ಲಿ ಯಾವುದೇ ವಿಧಾನ ಪರಿಷತ್ತು ಅಭ್ಯರ್ಥಿಗಳ ಪರವಾಗಿ ಪ್ರಚಾರ ನಡೆಸುವಂತಿಲ್ಲ.
3. ಪ್ರಾಂಶುಪಾಲರು, ಬೋಧಕರು, ಬೋಧಕೇತರ ಸಿಬ್ಬಂದಿಗಳು ಕಾಲೇಜು ಅವಧಿಯಲ್ಲಿ ಕಾಲೇಜಿನ ನಿಯಮಗಳನ್ನು ಉಲ್ಲಂಘಿಸುವಂತಿಲ್ಲ ಹಾಗೂ ಚುನಾವಣೆ ಅಭ್ಯರ್ಥಿಗಳ ಪರವಾಗಿ ಪ್ರಚಾರ ನಡೆಸಲು ತೆರಳುವಂತಿಲ್ಲ
4. ಚುನಾವಣೆ ಮಾದರಿ ನೀತಿ ಸಂಹಿತೆ ಉಲ್ಲಂಘನೆಯ ವಿಚಾರವಾಗಿ ಪ್ರಾಂಶುಪಾಲರು, ಬೋಧಕರು ಬೋಧಕೇತರ ಸಿಬ್ಬಂದಿಗಳ ವಿರುದ್ಧ ಯಾವುದೇ ದೂರುಗಳು ಬಂದಲ್ಲಿ ನಿಯಮಾನುಸಾರ ಕಟ್ಟುನಿಟ್ಟಿನ ಶಿಸ್ತಿನ ಕ್ರಮಕೈಗೊಳ್ಳಲಾಗುವುದು.

ಜಂಟಿ ನಿರ್ದೇಶಕರು
ಜಂಟಿ ನಿರ್ದೇಶಕರು
ಪ್ರಾದೇಶಿಕ ಕಛೇರಿ
ಕಾಲೇಜು ಶಿಕ್ಷಣ ಇಲಾಖೆ
ಮೈಸೂರು - 570 005

ಇವರಿಗೆ,

ಈ ಕಛೇರಿ ವ್ಯಾಪ್ತಿಯ ಎಲ್ಲಾ ಸರ್ಕಾರಿ/ಅನುದಾನ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಈ ಸುತ್ತೋಲೆಯಲ್ಲಿನ ಅಂಶಗಳನ್ನು ಎಲ್ಲಾ ಬೋಧಕ, ಬೋಧಕೇತರ ಸಿಬ್ಬಂದಿಗಳ ಗಮನಕ್ಕೆ ತರಲು ಸೂಚಿಸಿದೆ.

ಪ್ರತಿಗಳು

1. ಸನ್ಮಾನ್ಯ ಜಿಲ್ಲಾಧಿಕಾರಿಗಳು, ಮೈಸೂರು
2. ಕಛೇರಿ ಪ್ರತಿ.